**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 645/2021**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಸಿದ್ದೇಶ್ | ಪ್ರಾ.ಸಾಃ4 |
| ತಂದೆಯ/ಗಂಡನ ಹೆಸರು | : | ಶಿವರುದ್ರಪ್ಪ | ಚಾಸಾಃ5 |
| ವಯಸ್ಸು | : | 48 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ಗುಂಡೇರಿ ಗ್ರಾಮ | ದಿಃ29.01.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಚಾಸಾ.4 ಗೊತ್ತು. ನ್ಯಾಯಾಲಯದ ಮುಂದಿರುವ ಆರೋಪಿತರು ನಮ್ಮ ಪಕ್ಕದ ಗ್ರಾಮದವರು. ಸಾಕ್ಷಿ ನಿಪಿ.9 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.9(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಹೊಳಲ್ಕೆರೆಯ ಪೊಲೀಸ್ ಠಾಣೆಯಲ್ಲಿ ಕೋವಿಡ್ 2019 ಸಮಯದಲ್ಲಿ ಮಾಡಿರುತ್ತೇನೆ. ಮಧ್ಯದ ಅಂಗಡಿಯಲ್ಲಿ ಕಳುವಾದ ವಿಚಾರದ ಕುರಿತು ಸದರಿ ಸಹಿಯನ್ನು ಮಾಡಿರುತ್ತೇನೆ. ಮಧ್ಯದ ಅಂಗಡಿಯ ಬಳಿ ಛಾಯಾಚಿತ್ರವನ್ನು ತೆಗೆದಿದ್ದರು. ಸಾಕ್ಷಿ ನಿಪಿ.10 ಮತ್ತು 11 ರ ಛಾಯಾಚಿತ್ರಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಕಳ್ಳತನದ ವಿಚಾರದ ಕುರಿತು ಛಾಯಾಚಿತ್ರಗಳನ್ನು ತೆಗೆದಿದ್ದರು. ಸಾಕ್ಷಿ ಅಮಾನತ್ತು ನಿಪಿ.12 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.12(ಬಿ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಛಾಯಾಚಿತ್ರ ತೆಗೆದ ಮರುದಿನ ಸಹಿ ಮಾಡಿರುತ್ತೇನೆ. ಪೊಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ಮಹಜರನ್ನು ಜರುಗಿಸಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿ ಅಮಾನತ್ತು ಪಂಚನಾಮೆ ಕಾಲಕ್ಕೆ ತೆಗೆದ ಛಾಯಾಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಸದರಿ ಛಾಯಾಚಿತ್ರವನ್ನು ರಂಗಸ್ವಾಮಿ ರವರ ತೋಟದಲ್ಲಿ ತೆಗೆದಿದ್ದಾರೆ. ಮಧ್ಯದ ಅಂಗಡಿ ಕಳುವಾದ ವಿಚಾರದ ಕುರಿತು ಸದರಿ ಛಾಯಾಚಿತ್ರವನ್ನು ತೆಗೆದಿರುತ್ತಾರೆ. ಸದರಿ ಸಮಯದಲ್ಲಿ ನನ್ನೊಂದಿಗೆ ಚಾಸಾ.3 ಮತ್ತು 4 ರವರು ಸಹ ಇದ್ದರು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. ದಿನಾಂಕ 16.08.2020 ರಂದು ಹೊಳಲ್ಕೆರೆ ಪೊಲೀಸರು ಗುಂಡೇರಿ ಗ್ರಾಮದ ಶ್ರೀ ರಾಘವೇಂದ್ರ ವೈನ್‌ಶಾಪ್ ಮುಂಭಾಗ 1 ಮತ್ತು 2 ನೇ ಆರೋಪಿತರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ.5 ರವರ ಸಮಕ್ಷಮ ಬೆಳಗ್ಗೆ 11.15 ರಿಂದ 12.15 ರವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ.10 ಮತ್ತು 11 ರ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಮದ್ಯಾಹ್ನ 12.40 ರಿಂದ 1.30 ರವರೆಗೆ 1 ನೇ ಆರೋಪಿತನಿಗೆ ಸೇರಿದ ಹಿರೇಹಳ್ಳಿ ಗ್ರಾಮದ ಜಮೀನಿನಲ್ಲಿ ಆರೋಪಿತನು ಹಾಜರುಪಡಿಸಿದ ಹಾರೆ ಕೋಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಮಾನತ್ತು ಪಂಚನಾಮೆಯ ಕಾಲಕ್ಕೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿ. ಆದರೆ ಆ ವಿಚಾರ ಗೊತ್ತಿಲ್ಲ ಎಂದು ಹೇಳುತ್ತಾರೆ. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ, ಆರೋಪಿತರು ನಮ್ಮ ಪಕ್ಕದ ಗ್ರಾಮದವರಾಗಿರುವ ಕಾರಣ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 5 ನೇ ಆರೋಪಿತರ ಪರ ಶ್ರೀ ಯು.ಎಸ್. ವಕೀಲರಿಂದಃ**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 4 ನೇ ಆರೋಪಿತರ ಪರ ಶ್ರೀ ಎಸ್.ವಿ ವಕೀಲರಿಂದಃ**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು. )

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊಳಲ್ಕೆರೆ